RNI.No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| ಭಾಗ– IV-A | ಬೆಂಗಳೂರು, ಬುಧವಾರ, ಮೇ ೧೩, ೨೦೧೫ (ವೈಶಾಖ ೨೩, ಶಕ ವರ್ಷ ೧೯೩೭) | ಸಂ. ೫೪೫ |
|---|---|---|
| Part– IV-A | Bengaluru, Wednesday, May 13, 2015 (Vaishakha 23, Shaka Varsha 1937) | No. 545 |



ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 11 ಶಾಸನ 2015, ಬೆಂಗಳೂರು, ದಿನಾಂಕ: 13.05.2015**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2015ಕ್ಕೆ 2015ರ ಮೇ ತಿಂಗಳ ಹನ್ನೊಂದನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2015ರ ಕರ್ನಾಟಕ ಅಧಿನಿಯಮ ಸಂಖ್ಯೆ:23 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2015 ರ ಕರ್ನಾಟಕ ಅಧಿನಿಯಮ ಸಂಖ್ಯೆ: 23**

(2015ರ ಮೇ ಹದಿಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ)**
**(ತಿದ್ದುಪಡಿ) ಅಧಿನಿಯಮ, 2015**

(2015ರ ಮೇ ಹನ್ನೊಂದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007ನ್ನು (2007ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2015 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 5ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007ರ (2007ರ ಕರ್ನಾಟಕ ಅಧಿನಿಯಮ 29) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 5ನೇ ಪ್ರಕರಣದಲ್ಲಿನ ಪರಂತುಕಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"ಪರಂತು, ಒಂದು ಜೇಷ್ಠತಾ ಘಟಕದಲ್ಲಿ ಅಂಥ ವರ್ಗಾವಣೆಗಳ ಒಟ್ಟು ಸಂಖ್ಯೆಯು, ಸಾರ್ವಜನಿಕ ಹಿತಾಸಕ್ತಿ ವರ್ಗಾವಣೆಗಳ ಸಂದರ್ಭದಲ್ಲಿ ಶೇಕಡಾ ಐದರಷ್ಟನ್ನು ಮತ್ತು ಅಂತರ್ ಘಟಕೀಯ ಜೇಷ್ಠತಾ ವರ್ಗಾವಣೆಗಳ ಸಂದರ್ಭದಲ್ಲಿ ಶೇಕಡಾ ಮೂರರಷ್ಟನ್ನು ಹಾಗೂ ಒಟ್ಟಾರೆಯಾಗಿ ಆ ಜೇಷ್ಠತಾ ಘಟಕದ ಕೇಡರ್‌ನಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ ಒಟ್ಟು ಸಂಖ್ಯೆ ಶೇಕಡಾ ಎಂಟರಷ್ಟನ್ನು ಮೀರತಕ್ಕದ್ದಲ್ಲ."

**3. 6ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 6ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ (1)ನೇ ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(1) ಗಂಡ, ಹೆಂಡತಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ ಮತ್ತು ಶಿಕ್ಷಕರು ಪ್ರಸ್ತುತ ಇರುವ ಜೇಷ್ಠತಾ ಘಟಕದಲ್ಲಿ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಸಲ್ಲಿಸಿದ್ದಲ್ಲಿ, ಕೌನ್ಸಿಲಿಂಗ್ ಮೂಲಕ ಆತನ/ಆಕೆಯ ಹೆಂಡತಿ/ಗಂಡ ಸೇವೆ ಸಲ್ಲಿಸುತ್ತಿರುವ ಸ್ಥಳಕ್ಕೆ ಅಥವಾ ಹತ್ತಿರದ ಸ್ಥಳಕ್ಕೆ ಸ್ಪಷ್ಟ ಖಾಲಿ ಸ್ಥಳದ ಲಭ್ಯತೆಯ ಆಧಾರದ ಮೇರೆಗೆ ಸೇವಾ ಅವಧಿಯಲ್ಲಿ ಎರಡು ಬಾರಿಗಿಂತ ಹೆಚ್ಚಲ್ಲದೆ ವರ್ಗಾವಣೆ ಮಾಡಬಹುದು:

(1ಎ) ಪರಸ್ಪರ ವರ್ಗಾವಣೆಗಳ ಸಂದರ್ಭದಲ್ಲಿ, ಇಬ್ಬರೂ ಶಿಕ್ಷಕರು ಕನಿಷ್ಠ ಮೂರು ವರ್ಷಗಳ ಸೇವಾ ಅವಧಿಯನ್ನು ಪೂರ್ಣಗೊಳಿಸಿದ ಷರತ್ತಿಗೆ ಒಳಪಟ್ಟು; ಆ ವಲಯಕ್ಕೆ ವರ್ಗಾಯಿಸಲು ಅನ್ಯಥಾ ಅರ್ಹನಾಗಿರುವ; ಕನಿಷ್ಠ ಮೂರು ವರ್ಷಗಳ ಸೇವೆಯು ಬಾಕಿ ಉಳಿದಿರುವ; ಆದರೆ ಅಂಥ ಪರಸ್ಪರ ವರ್ಗಾವಣೆಯು ಆತನ ಸೇವಾವಧಿಯಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಅನುಮತಿಸತಕ್ಕದ್ದಲ್ಲ ಹಾಗೂ ಆತನು ಜೇಷ್ಠತೆಯ ರಕ್ಷಣೆಗೆ ಅರ್ಹನಾಗಿರತಕ್ಕದ್ದಲ್ಲ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಬಿ. ಗುಂಜಿಗಾವಿ
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿಓ) (450 ಪ್ರತಿಗಳು)